ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಬುಧವಾರ, ದಿನಾಂಕ : 03 ನೇ ಫೆಬ್ರುವರಿ, 2021

ಖಾಲಿ ಹುದ್ದೆಗಳ ನೇಮಕಾತಿ ಕುರಿತು

ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :-

270 (296) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಳಗಾವಿ ವಿಭಾಗ ವ್ಯಾಪ್ತಿಯ ಕಂದಾಯ ಇಲಾಖೆಯ ಅಧೀನದ ಕಛೇರಿಗಳಲ್ಲಿ ಒಟ್ಟು ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು ; (ವೃಂದವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಅವುಗಳಲ್ಲಿ ಖಾಯಂ ಗುತ್ತಿಗೆ ಆಧಾರದ ಮೇಲೆ ಮತ್ತು ದಿನಗೂಲಿ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು;

(ಇ) ಪ್ರಸ್ತುತ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ; (ವೃಂದವಾರು, ತಾಲ್ಲೂಕುವಾರು ವಿವರ ನೀಡುವುದು)

(ಈ) ಖಾಲಿಯಿರುವ ಹುದ್ದೆಗಳನ್ನು ನೇಮಕ ಮಾಡಿಕೊಳ್ಳಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಉ) ಹಾಗಿದ್ದಲ್ಲಿ, ಸದರಿ ನೇಮಕಾತಿ ಪ್ರಕ್ರಿಯೆಗಳು ಪ್ರಸ್ತುತ ಯಾವ ಹಂತದಲ್ಲಿವೆ ; ಮತ್ತು ಯಾವ ಕಾಲಮಿತಿಯಲ್ಲಿ ನೇಮಕಾತಿ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಲಾಗುವುದು ; ಇಲ್ಲವಾದಲ್ಲಿ, ನೇಮಕಾತಿ ವಿಳಂಬಕ್ಕೆ ಕಾರಣಗಳೇನು ?